*ಓ.ಎಸ್.ನಂ.78/2019*
*ಪಿ.ಡಬ್ಲ್ಯೂ-1*

***ದಿಃ 19-02-2020 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.***

***ಮುಖ್ಯ ವಿಚಾರಣೆ ಃ ವಾದಿ ಪರ*** ಶ್ರೀ ಟಿ ಎಲ್ ಪಿ ***ವಕೀಲರಿಂದ***

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನ್ನ ಸ್ವಂತ ಮಾಹಿತಿ ಮೇರೆಗೆ ನನ್ನ ವಕೀಲರಿಗೆ ಹೇಳಿ ಬರೆಸಿದ್ದು ಅವು ಸತ್ಯವಾಗಿರುತ್ತವೆ. ಪ್ರಮಾಣಪತ್ರದಲ್ಲಿನ ಸಂಗತಿಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

***2. ನಾನು ನ್ಯಾಯಾಲಯಕ್ಕೆ*** ದಿಃ *12-01-1950* ರ ಕ್ರಯಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*1* ಎಂದು ಗುರುತಿಸಲಾಯ್ತು. ದಿಃ*21-7-1950* ರ ಕ್ರಯಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*2* ಎಂದು ಗುರುತಿಸಲಾಯ್ತು. ಋಣಭಾರ ಪತ್ರದ ಎರಡು ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-*3* ಮತ್ತು *4* ಎಂದು ಗುರುತಿಸಲಾಯ್ತು. ದಿಃ *06-7-2007* ರ ಹಕ್ಕು ಖುಲಾಸೆ ಪತ್ರದ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*5* ಎಂದು ಗುರುತಿಸಲಾಯ್ತು. ಕಾನೇಶುಮಾರಿ ಪ್ರತಿಯ ದೃಡೀಕೃತ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-*6* ರಿಂದ *13* ಎಂದು ಗುರುತಿಸಲಾಯ್ತು. ದಿಃ *19-7-1971* ರ ಕ್ರಯಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*14* ಎಂದು ಗುರುತಿಸಲಾಯ್ತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ-

ಪ್ರತಿವಾದಿ ಹಾಗೂ ಅವರ ಪರ ವಕೀಲರು ಗೈರುಹಾಜರಿದ್ದು, ಪ್ರತಿವಾದಿ ತಮ್ಮ ಯಾವುದೇ ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯ್ತು.

***(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)***

***ಓ. ಕೇ. ಸ. ಇ. ಎ. ಒ.***

***ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು***
***ಪ್ರ.ದ.ನ್ಯಾ.ದಂ. ರವರು, ತರೀಕೆರೆ.***